## ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ ಎನ್. ಎಸ್. ಭೋಸ್‌ರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 232

ಉತ್ತರ ದಿನಾಂಕ : 16.07.2019

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ರಾಯಚೂರು ಜಿಲ್ಲೆಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಖ್ಯೆ ಎಷ್ಟು; ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಎಷ್ಟು; | ರಾಯಚೂರು ಜಿಲ್ಲೆಗೆ ಒಟ್ಟು 617 ಶುದ್ಧ ಕುಡಿಯುವ ನೀರಿನ ಘಟಕಗಳು ಅನುಮೋದನೆಯಾಗಿರುತ್ತದೆ. 581 ಘಟಕಗಳನ್ನು ಅನುಷ್ಠಾನಗೊಳಿಸಲಾಗಿರುತ್ತದೆ ಇವುಗಳ ಪೈಕಿ 510 ಘಟಕಗಳು ಕಾರ್ಯನಿರ್ವಹಿಸುತ್ತಿದೆ. |
| ಆ. | ರಾಯಚೂರು ಜಿಲ್ಲೆಯಲ್ಲಿ ಜಲಧಾರೆ ಮತ್ತು ಜಲಾಮೃತ ಯೋಜನೆಯನ್ನು ಜಾರಿಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | 2019-20ನೇ ಸಾಲಿನ ಬಜೆಟ್‌ನಲ್ಲಿ ಮಾನ್ಯ ಮುಖ್ಯ ಮಂತ್ರಿಗಳು **ಜಲಧಾರೆ** ಯೋಜನೆಯನ್ನು ಅನುಷ್ಠಾನಗೊಳಿಸುವ ಕುರಿತು, ಮೊದಲ ಹಂತದಲ್ಲಿ ರಾಯಚೂರು ಜಿಲ್ಲೆಗೆ ಶಾಶ್ವತ ಕುಡಿಯುವ ನೀರನ್ನು ಒದಗಿಸಲು ಯೋಜಿಸಲಾಗಿದೆ.<br>**ಜಲಾಮೃತ** – ಜಲಾಮೃತ ಯೋಜನೆಯನ್ನು ಪರಿಣಾಮಕಾರಿಯಾಗಿ ಮೇಲ್ವಿಚಾರಣೆ ನಡೆಸಲು ಗ್ರಾಮ / ತಾಲ್ಲೂಕು/ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಸಮಿತಿಗಳನ್ನು ರಚಿಸಲಾಗಿದೆ. ಜಲಾಮೃತ ಯೋಜನೆಯಡಿ ಕಾಮಗಾರಿಗಳನ್ನು ಅನುಷ್ಠಾನಿಸಲು ಮಾಹಿತಿ ಕೈಪಿಡಿಯನ್ನು ರಾಜ್ಯ ಮಟ್ಟದಲ್ಲಿ ತಯಾರಿಸಿ, ರಾಯಚೂರು ಜಿಲ್ಲೆಗೆ ಪತ್ರದ ಮೂಲಕ ನೀಡಲಾಗಿದೆ. ಜಲಾಮೃತ ಯೋಜನೆಯನ್ನು ಪ್ರಸ್ತುತ ಮಹಾತ್ಮ ಗಾಂಧಿ ನರೇಗಾ ಯೋಜನೆ ಮತ್ತು ಇತರೆ ಹಾಲಿ ಇರುವ ಯೋಜನೆಗಳೊಂದಿಗೆ ಒಗ್ಗೂಡಿಸುವಿಕೆಯ ಮೂಲಕ ಅನುಷ್ಠಾನಿಸಲು ಕ್ರಮವಹಿಸಲಾಗುತ್ತಿದೆ. |
| ಇ. | ರಾಯಚೂರು ಜಿಲ್ಲೆಯಲ್ಲಿ ನರೇಗಾ ಯೋಜನೆಯಡಿಯಲ್ಲಿ ಕೂಲಿ ಕಾರ್ಮಿಕರಿಗೆ ನೀಡಬೇಕಾಗಿರುವ ಬಾಕಿ ವೇತನದ ಮೊತ್ತ ಎಷ್ಟು; ಈ ಯೋಜನೆಯಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬರಬೇಕಾಗಿರುವ ಬಾಕಿ ಅನುದಾನ ಎಷ್ಟು? | 2019-20ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಗೆ ನರೇಗಾ ಯೋಜನೆಯಡಿಯಲ್ಲಿ ಕೂಲಿ ಕಾರ್ಮಿಕರಿಗೆ ನೀಡಬೇಕಾಗಿರುವ ಬಾಕಿ ವೇತನದ ಮೊತ್ತ ರೂ.3.66ಕೋಟಿ.<br>2019-20ನೇ ಸಾಲಿನಲ್ಲಿ ನರೇಗಾ ಯೋಜನೆಗೆ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬರಬೇಕಾಗಿರುವ ಬಾಕಿ ಅನುದಾನದ ಮೊತ್ತ ರೂ.3219.11ಕೋಟಿ. |

ಕಡತ ಸಂಖ್ಯೆ: ಗ್ರಾಕುನೀ&ನೈಇ 80 ಗ್ರಾನೀಸ(3)2019

(ಕೃಷ್ಣ ಬೈರೇಗೌಡ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೃಷ್ಣ ಬೈರೇಗೌಡ
ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್
ಸಚಿವರು